ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1190
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	16.03.2021
ಉತ್ತರಿಸುವ ಸಚಿವರು	:	ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರು, ಇತರ ಪಾನೀಯ ಹಾಗೂ ಆಹಾರ ವಸ್ತುಗಳನ್ನು ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರು, ಇತರೆ ಪಾನೀಯ ಹಾಗೂ ಆಹಾರ ವಸ್ತುಗಳನ್ನು ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.
(ಆ)	ಬೆಂಗಳೂರಿನ ಮೆಜೆಸ್ಟಿಕ್ ಬಸ್ಸು ನಿಲ್ದಾಣದಲ್ಲಿರುವ ಎಲ್ಲಾ ಚಿಲ್ಲರೆ ಮಾರಾಟಗಾರರು ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದು ಈ ವರ್ತಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;	ಬೆಂಗಳೂರಿನ ಮೆಜೆಸ್ಟಿಕ್ ಬಸ್ಸು ನಿಲ್ದಾಣದಲ್ಲಿರುವ ಎಲ್ಲಾ ಚಿಲ್ಲರೆ ಮಾರಾಟಗಾರರು ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಕಾನೂನು ಮಾಪನಶಾಸ್ತ್ರ ಇಲಾಖಾ ಕ್ಷೇತ್ರಾಧಿಕಾರಿಗಳು ಆಗಿಂದಾಗ್ಗೆ ತಪಾಸಣಾ ಕಾರ್ಯಗಳನ್ನು ನಡೆಸಿ ಈ ರೀತಿಯ ಪ್ರಕರಣಗಳು ಕಂಡು ಬಂದಲ್ಲಿ ದಿ ಲೀಗಲ್ ಮೆಟ್ರಾಲಜಿ (ಪೊಟ್ಟಣ ಸಾಮಗ್ರಿ) ನಿಯಮಗಳು 2011ರ ನಿಯಮಗಳಡಿಯಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದೆ ಮತ್ತು ಈ ಪ್ರಕರಣಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಿ ಅಭಿಸಂಧಾನ ದಂಡವನ್ನು ಸಂಗ್ರಹಿಸಲಾಗುತ್ತಿದೆ.
(ಇ)	ಕಳೆದ ಮೂರು ವರ್ಷಗಳಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ	ಕಳೆದ ಮೂರು ವರ್ಷಗಳಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ವರ್ತಕರ ಮೇಲೆ

<table>
<tr>
<td></td>
<td>ಮಾಡುತ್ತಿರುವ ಎಷ್ಟು ವರ್ತಕರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ಹಾಗೂ ಎಷ್ಟು ಅಂಗಡಿಗಳ ಅನುಮತಿಯನ್ನು ರದ್ದು ಪಡಿಸಲಾಗಿದೆ?</td>
<td>ದಾಖಲಾಗಿರುವ ದಾಖಲಾಗಿರುವ ಪ್ರಕರಣಗಳು ಈ ಕೆಳಗಿನಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಪ್ರಕರಣಗಳ ಸಂಖ್ಯೆ</th></tr>
<tr><td>1.</td><td>2017-18</td><td>371</td></tr>
<tr><td>2.</td><td>2018-19</td><td>261</td></tr>
<tr><td>3.</td><td>2019-20</td><td>295</td></tr>
</table>
ತಪ್ಪಿತಸ್ಥರ ವಿರುದ್ಧ ದಿ ಲೀಗಲ್ ಮೆಟ್ರಾಲಜಿ (ಪೊಟ್ಟಣ ಸಾಮಗ್ರಿ) ನಿಯಮಗಳು 2011ರ ನಿಯಮಗಳಡಿಯಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದೆ ಮತ್ತು ಈ ಪ್ರಕರಣಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಿ ಅಭಿಸಂಧಾನ ದಂಡವನ್ನು ಸಂಗ್ರಹಿಸಲಾಗುತ್ತಿದೆ ಹಾಗೂ ಅಭಿಸಂಧಾನ ದಂಡವನ್ನು ಭರಿಸಲು ನಿರಾಕರಿಸುವವರ ವಿರುದ್ಧ ಸಂಬಂಧಿಸಿದ ಕ್ಷೇತ್ರವ್ಯಾಪ್ತಿಯ ಜೆ.ಎಂ.ಎಫ್.ಸಿ ಕೋರ್ಟ್‌ನಲ್ಲಿ ದಾವೆ ಹೂಡಲಾಗುತ್ತಿದೆ ಮತ್ತು ಮಾನ್ಯ ನ್ಯಾಯಾಲಯದ ಆದೇಶದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.</td>
</tr>
</table>

ಸಂಖ್ಯೆ: ಆನಾಸ 22 ಕಾಮಾಸೇ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು